## 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು

**ಸಿ.ಸಿ. ನಂ.731-2019** **ಪಿ .ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು | ಮಹೇಶ |
| ತಂದೆ/ ಗಂಡನ ಹೆಸರು | ಲೇ.ನಂಜಪ್ಪ |
| ವಯಸ್ಸು | 50 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ್ತವ್ಯ | ನಂಜನಗೂಡು |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 29-05-2024.** |

**<u>ಮುಖ್ಯ ವಿಚಾರಣೆಃ ಪಿರ್ಯಾದಿ ಪರ ಶ್ರೀ ಬಿ.ಎಸ್.ಎ ವಕೀಲರಿಂದಃ</u>**

**ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯ ಸತ್ಯದಿಂದ ಕೂಡಿದ್ದು ಅದನ್ನು ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.**

ಆರೋಪಿ ನನಗೆ ನೀಡಿದ ಚೆಕ್ ನಂ.863116 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಅದರ ಮೇಲಿರುವ ಆರೋಪಿಯ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು, ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ದಿ.22-11-2018 ರಂದು ನನ್ನ ವಕೀಲರ ಮೂಲಕ ಆರೋಪಿಗೆ ಕಳುಹಿಸಿದ ನೋಟಿಸ್‌ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಅಂಚೆ ಸ್ವೀಕೃತಿಯನ್ನು

ಹಾಜರುಪಡಿಸಿದ್ದು ಅದನ್ನು ನಿಪಿ–4 ಎಂದು ಗುರುತಿಸಲಾಯಿತು. ಆದುದರಿಂದ ನಾನು ಪಿರ್ಯಾದಿನಲ್ಲಿ ಕೋರಿರುವಂತೆ ಆರೋಪಿ ವಿರುದ್ಧ ಸೂಕ್ತ ಆದೇಶ ಮಾಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

(ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಸಮಯವಕಾಶ ಕೋರಿದ್ದು, ಸಮಯವಕಾಶ ನೀಡಲಾಯಿತು)

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/–**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**